388 (661) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದವರು ವಾಸದ ಮನೆಗಳು ಹಾಗೂ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಹತ್ತಿರ ಟ್ರಾನ್ಸ್ ಫಾರ್ಮರ್ ಗಳನ್ನು ಸ್ಥಾಪಿಸುವಾಗ ಅನುಸರಿಸುವ ನೀತಿ ನಿಯಮಗಳೇನು (ಪೂರ್ಣ ವಿವರಗಳನ್ನು ಒದಗಿಸುವುದು),

ಆ) ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆಯೇ,

ಇ) ಹಾಗಿದ್ದಲ್ಲಿ, ಬೆಸ್ಕಾಂನವರು (ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ) ನಿಯಮಗಳನ್ನು ಉಲ್ಲಂಘನೆ ಮಾಡಿ ಬೆಂಗಳೂರು ನಗರದ ರಾಜಾಜಿನಗರ ಪ್ರದೇಶದಲ್ಲಿ ಹಲವಾರು ವಾಸದ ಮನೆಗಳ ಪಕ್ಕದಲ್ಲಿ ಹಾಗೂ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಪಕ್ಕದಲ್ಲಿ ಬೃಹತ್ ಪ್ರಮಾಣದ ವಿದ್ಯುತ್ ಪ್ರವಹಿಸುವ ಟ್ರಾನ್ಸ್ ಫಾರ್ಮರ್‌ಗಳನ್ನು ಸ್ಥಾಪಿಸಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳನ್ನು ಬಂದಿವೆಯೇ,

ಈ) ಈ ದೂರುಗಳ ಮೇಲೆ ಕೈಗೊಂಡಿರುವ ಕ್ರಮಗಳೇನು,

ಉ) ಹಾಗಿದ್ದಲ್ಲಿ ಜನರು ವಾಸ ಮಾಡುವ/ನಿರ್ಮಾಣ ಹಂತದಲ್ಲಿರುವ ಮನೆಗಳ ಪಕ್ಕದಲ್ಲಿ ನಿಯಮಗಳಿಗೆ ವಿರುದ್ಧವಾಗಿ ಸ್ಥಾಪಿಸಲಾಗಿರುವ ಅಪಾಯಕಾರಿ ಟ್ರಾನ್ಸ್ ಫಾರ್ಮರ್‌ಗಳನ್ನು ಕೂಡಲೇ ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) .

ಅ) ವಿದ್ಯುತ್ ಸರಬರಾಜು ಕಂಪನಿಗಳು ವಾಸದ ಮನೆಗಳು ಹಾಗೂ ನಿರ್ಮಾಣದ ಹಂತದಲ್ಲಿರುವ ಕಟ್ಟಡಗಳ ಹತ್ತಿರ ಟ್ರಾನ್ಸ್ ಫಾರ್ಮರ್ ಗಳನ್ನು ಸ್ಥಾಪಿಸುವಾಗ ಭಾರತೀಯ ವಿದ್ಯುತ್ ನಿಯಮಾವಳಿ 1956ರ ನಿಯಮಗಳ ಪ್ರಕಾರ ಕನಿಷ್ಠ 12 ಮೀಟರ್ ಅಂತರದಲ್ಲಿ (Horizontal clearance) ಇರುವಂತೆ ಟ್ರಾನ್ಸ್ ಫಾರ್ಮರ್ ಗಳನ್ನು ಸ್ಥಾಪಿಸುತ್ತಿವೆ

ಆ) ಹೌದು ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ ಆದರೆ, ಬೆಂಗಳೂರು ನಗರದ ಕೆಲವು ಪ್ರದೇಶಗಳಲ್ಲಿ ಸಾರ್ವಜನಿಕ ಕಟ್ಟಡಗಳನ್ನು ನಿರ್ಮಾಣ ಮಾಡುವಾಗ ಬೆಂಗಳೂರು ಮಹಾನಗರ ಪಾಲಿಕೆಯ ನಿಯಮಗಳನ್ನು ಉಲ್ಲಂಘಿಸಿ ನಿವೇಶನಗಳನ್ನು ಒತ್ತುವರಿ ಮಾಡಿ ಕಟ್ಟಡಗಳನ್ನು ಕಟ್ಟಿರುತ್ತಾರೆ ಇಂತಹ ಸಂದರ್ಭಗಳಲ್ಲಿ ಹಾಲಿ ಇರುವ ಸುರಕ್ಷಿತ ಅಂತರವು ಕಡಿಮೆಯಾಗಿ ವಿದ್ಯುತ್ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುತ್ತದೆ

ಇ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವತಿಯಿಂದ ಟ್ರಾನ್ಸ್ ಫಾರ್ಮರ್ ಗಳನ್ನು ಸ್ಥಾಪಿಸುವಾಗ ಭಾರತೀಯ ವಿದ್ಯುತ್ ನಿಯಮಾವಳಿ 1956ರ ನಿಯಮಗಳ ಉಲ್ಲಂಘನೆ ಆಗಿರುವುದಿಲ್ಲ ಬೆಂಗಳೂರಿನ ರಾಜಾಜಿನಗರ ಹಾಗೂ ಇತರೆ ಪ್ರದೇಶಗಳಲ್ಲಿ ಒತ್ತುವರಿ ಮಾಡಿ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿರುವುದರಿಂದ ಅಥವಾ ನಿರ್ಮಿಸಿರುವುದರಿಂದ ಹಾಗೂ ಕಿರಿದಾದ ರಸ್ತೆಗಳಿರುವುದರಿಂದ ಕೆಲವು ಪ್ರಕರಣಗಳಲ್ಲಿ ದೂರುಗಳು ಬಂದಿರುತ್ತವೆ

ಈ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಗೆ ಬಂದ ಇಂತಹ ಎಲ್ಲಾ ದೂರುಗಳನ್ನು ಆಯಾ ಅರ್ಜಿಯ ಅರ್ಹತೆ ಹಾಗೂ ಕಂಪನಿಯ ನಿಯಮಗಳನ್ನು ಅನುಸರಿಸಿ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಬೆಸ್ಕಾಂ ಕಟ್ಟಡಗಳ ಸಾಮೀಪ್ಯತೆಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ವಿದ್ಯುತ್ ನಿಯಮಾವಳಿಗಳ ಪ್ರಕಾರ ಟ್ರಾನ್ಸ್ ಫಾರ್ಮರ್‌ಗಳನ್ನು ಸ್ಥಾಪಿಸುತ್ತಿದೆ ಹೀಗಿದ್ದರೂ ಸಹ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಳಾಂತರಿಸಬೇಕೆಂದು ಕಟ್ಟಡಗಳ ನಿರ್ಮಾಣದಾರರು ಕೋರಿದಲ್ಲಿ ನಿರ್ಮಾಣದಾರರು ಕಟ್ಟಡಗಳನ್ನು ನಿರ್ಮಾಣ ಮಾಡುವಾಗ ಮಾಡಿರುವ ಲೋಪದೋಷಗಳಿಂದಾಗಿ ಸುರಕ್ಷಿತ ಅಂತರವು ಕಡಿಮೆಯಾಗಿ ಟ್ರಾನ್ಸ್ ಫಾರ್ಮರನ್ನು ಸ್ಥಳಾಂತರಿಸಬೇಕಾದಲ್ಲಿ ಟ್ರಾನ್ಸ್ ಫಾರ್ಮರ್‌ನ ಸ್ಥಳಾಂತರಿಸುವ ವೆಚ್ಚವನ್ನು ಕಟ್ಟಡ ನಿರ್ಮಾಣದಾರರೇ ಭರಿಸಬೇಕಾಗುತ್ತದೆ

ಉ) ಸಾರ್ವಜನಿಕ ಸ್ಥಳಗಳಲ್ಲಿ ಟ್ರಾನ್ಸ್‌ಫಾರ್ಮರ್, ವಿದ್ಯುತ್ ಕಂಬ ಹಾಗೂ ವಿದ್ಯುತ್ ಮಾರ್ಗಗಳು ಅಪಾಯಕಾರಿ ಸ್ಥಿತಿಯಲ್ಲಿದ್ದು, ಇದರಿಂದ ಸಾರ್ವಜನಿಕರ ಸುರಕ್ಷತೆಗೆ ಧಕ್ಕೆ ಉಂಟಾಗುವುದು ಕಂಡು ಬಂದಲ್ಲಿ ಇವುಗಳನ್ನು ಸ್ಥಳಾಂತರಿಸಲಾಗುವುದು ಮತ್ತು ಸರಿಪಡಿಸಲಾಗುವುದು ಒಂದು ವೇಳೆ ಟ್ರಾನ್ಸ್ ಫಾರ್ಮರ್ ಪಕ್ಕದಲ್ಲಿ ಹೊಸದಾಗಿ ಕಟ್ಟಡ ನಿರ್ಮಾಣವಾಗಿ, ನಿರ್ಮಾಣದಾರರು ಟ್ರಾನ್ಸ್ ಫಾರ್ಮರ್‌ನ್ನು ಸ್ಥಳಾಂತರಿಸಲು ಕೋರಿದಲ್ಲಿ ಟ್ರಾನ್ಸ್‌ಫಾರ್ಮರ್‌ನ ಸ್ಥಳಾಂತರಿಸುವ ವೆಚ್ಚವನ್ನು ಸಂಬಂಧಪಟ್ಟ ನಿರ್ಮಾಣದಾರರು ಭರಿಸಿದ ನಂತರವೇ, ಟ್ರಾನ್ಸ್‌ಫಾರ್ಮರನ್ನು ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದು

389 (662) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಸಹಕಾರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಸರ್ಕಾರದ ಸಚಿವಾಲಯ ಗೃಹ ನಿರ್ಮಾಣ ಸಂಘದ ಪದಾಧಿಕಾರಿಗಳು ಸಂಘದ ಹಣವನ್ನು ದುರುಪಯೋಗ ಪಡಿಸಿ ಜಮೀನನ್ನು ಕೊಂಡು ಮತ್ತೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿರುವುದು ನಿಜವೇ,